ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 01 ಸಿಡಿಸಿ(2)/2017-18

ನಿರ್ದೇಶಕರ ಕಛೇರಿ
ಅರಮನೆ ರಸ್ತೆ
ಬೆಂಗಳೂರು 560 001
ದಿ: 24-05-2017

-:ಸುತ್ತೋಲೆ:-

ವಿಷಯ:- ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ, ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಹಾಗೂ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪಕರುಗಳಿಗೆ/ಅಧಿಕಾರಿಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಬೆಂಗಳೂರಿನಲ್ಲಿ ನಡೆಯಲಿರುವ 5th INDIAN TECHNOLOGY CONGRESS (ITC)-2017ರಲ್ಲಿ ಭಾಗವಹಿಸಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ:- Chairman - Organising Committee, INDIAN TECHNOLOGY CONGRESS - 2017 ಇವರ ಪತ್ರ ದಿನಾಂಕ:22-04-2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ, ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಹಾಗೂ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಾಪರುಗಳಿಗೆ/ಅಧಿಕಾರಿಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ದಿನಾಂಕ:10-08-2017 ಮತ್ತು ದಿನಾಂಕ:11-08-2017ರಂದು NIHMANS, Convention Centre, Bangaloreನಲ್ಲಿ ನಡೆಯುವ 5th INDIAN TECHNOLOGY CONGRESS-2017ನ "Industry 4.0-Engineering the Interface with Real World" ಸಮ್ಮೇಳನದಲ್ಲಿ ಭಾಗವಹಿಸಲು ಪ್ರತಿ ಸಂಸ್ಥೆಯಿಂದ ಇಬ್ಬರು ಅಧ್ಯಾಪಕರು ಮತ್ತು ಪ್ರತಿ ವಿಭಾಗದಿಂದ ಒಬ್ಬ ವಿದ್ಯಾರ್ಥಿಗೆ ಅನುಮತಿಯನ್ನು ನೀಡಲಾಗಿದೆ. ಸದರಿಯವರುಗಳಿಗೆ ITC-2017 Registration fee ಮಾತ್ರ ಸಂಸ್ಥೆಯ ISTE/IEI ವತಿಯಿಂದ ಭರಿಸಲು ಪ್ರಾಚಾರ್ಯರಿಗೆ ಅನುಮತಿ ನೀಡಲಾಗಿದೆ. ಸದರಿಯವರುಗಳಿಗೆ ಇಲಾಖೆಯಿಂದ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಗಳನ್ನು ನೀಡಲಾಗುವುದಿಲ್ಲ. ಸದರಿ ಸಮ್ಮೇಳನದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಸಕ್ತ ಅಧ್ಯಾಪಕ/ಅಧಿಕಾರಿ ವರ್ಗದವರೂ ಸಹ ತಮ್ಮ ಸ್ವಂತ ಖರ್ಚಿನಲ್ಲಿ ಭಾಗವಹಿಸಬಹುದಾಗಿರುತ್ತದೆ. ITC-2017ರ ಸಮ್ಮೇಳನದಲ್ಲಿ ಭಾಗವಹಿಸುವ ಎಲ್ಲಾ ಅಧ್ಯಾಪಕ/ಅಧಿಕಾರಿಗಳ ಗೈರುಹಾಜರಿಯ ದಿನಗಳನ್ನು "ಅನ್ಯ ಕಾರ್ಯ ನಿಮಿತ್ತ" (OOD) ಎಂದು ಪರಿಗಣಿಸಲು ಸೂಚಿಸಲಾಗಿದೆ.

ರವಾನಿಸಲಾಗಿದೆ
ಸಂ.: 463
ದಿ: 27/5/2017
ಸಹಿ:

ನಿರ್ದೇಶಕರು

ಇವರಿಗೆ,

1. ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, 2ನೇ ಮಹಡಿ, ಬೆಂಗಳೂರು ಇವರಿಗೆ ಡಿಟಿಇ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಮುಂದಿನ ಕ್ರಮಕ್ಕಾಗಿ.
3. ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇಲ್ಲಿನ ಎಲ್ಲಾ ಅಧಿಕಾರಿಗಳಿಗೆ ಮಾಹಿತಿಗಾಗಿ.

ಸೂಚನೆ:- 5th INDIAN TECHNOLOGY CONGRESS-2017ನ ಸಮ್ಮೇಳನದ ಹೆಚ್ಚಿನ ಮಾಹಿತಿಯನ್ನು www.techcongress.netನಲ್ಲಿ ಹಾಗೂ participate@techcongress.netನಲ್ಲಿ ಪಡೆಯುವುದು.